# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2023-24ನೇ ಸಾಲಿನಲ್ಲಿ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ಸರ್ಕಾರದ ವಿವೇಚನಾ ನಿಧಿಯಡಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಪತ್ರ ಸಂಖ್ಯೆ:ಪಿಡಿಎಸ್ 24 ಪಿಎಂಎಸ್ 2021, ದಿನಾಂಕ:21.04.2021
2. ಮಾನ್ಯ ಮುಖ್ಯಮಂತ್ರಿಯವರ ಟಿಪ್ಪಣಿಯ ಸಂಖ್ಯೆ:ಇ.ಸಿಎಂ/ ಜಂಕಾ-1/ /2024
3. ಮಾನ್ಯ ಯೋಜನಾ ಸಚಿವರ ಟಿಪ್ಪಣಿ ಸಂಖ್ಯೆ: ಯೋಸಾಂ/122/ 2024, ದಿನಾಂಕ:20.06.2024
4. ಮಾನ್ಯ ಮುಖ್ಯಮಂತ್ರಿಯವರ ಜಂಟಿ ಕಾರ್ಯದರ್ಶಿಗಳ ಪತ್ರದ ಸಂಖ್ಯೆ:ECM/JS-1/8141676/2024, ದಿನಾಂಕ:10.07.2024
5. ಸರ್ಕಾರದ ಆದೇಶ ಸಂ:ಪಿಡಿಎಸ್ 23 ಪಿಟಿಪಿ 2024, ದಿನಾಂಕ:16.03.2024
6. ಸರ್ಕಾರದ ಆದೇಶ ಸಂ:ಪಿಡಿಎಸ್ 23 ಪಿಟಿಪಿ 2024 (ಭಾಗ-1) ದಿನಾಂಕ:19.07.2024

*****

**ಪ್ರಸ್ತಾವನೆ:**

2023-24ನೇ ಸಾಲಿನ ಆಯವ್ಯಯದಲ್ಲಿ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಗೆ ಲೆಕ್ಕಶೀರ್ಷಿಕೆ:4515 (ಬಂಡವಾಳ / ವಿ.ಘ.ಯೋ / ಗಿ.ಉ.ಯೋ)ರಡಿ ರೂ.3950.00 ಲಕ್ಷಗಳ ಅನುದಾನ ಒದಗಿಸಲಾಗಿದೆ.

ಮೇಲೆ ಓದಲಾದ (1)ರ ಸರ್ಕಾರದ ಪತ್ರದಲ್ಲಿ 2023-24ನೇ ಸಾಲಿನ ಆಯವ್ಯಯದಲ್ಲಿ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಗೆ ಒದಗಿಸಲಾಗಿರುವ (ಬಂಡವಾಳ/ ವಿ.ಘ.ಯೋ/ ಗಿ.ಉ.ಯೋ) ಅನುದಾನದಲ್ಲಿ ಶೇ.5ರಷ್ಟನ್ನು ಸರ್ಕಾರದ ವಿವೇಚನಾ ನಿಧಿಯಡಿ ನಿಗಧಿಪಡಿಸಿ, ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರಿಂದ ಕಾಮಗಾರಿಗಳ ಪ್ರಸ್ತಾವನೆಯನ್ನು ಪಡೆದು ಅನುಷ್ಠಾನಗೊಳಿಸುವಂತೆ ತಿಳಿಸಲಾಗಿದೆ.

ಮೇಲೆ ಓದಲಾದ (2) ಮತ್ತು (3)ರ ಟಿಪ್ಪಣಿಯಲ್ಲಿ, ಮಾನ್ಯ ಮುಖ್ಯಮಂತ್ರಿಯವರು ಶ್ರೀ ರಾಕೇಶ್ ಸಿದ್ಧರಾಮಯ್ಯ ಟ್ರಸ್ಟ (ರಿ), ಗದಗ ಜಿಲ್ಲೆಯ ಗದಗ ನಗರದ ಕಳಸಾಪೂರ ರಸ್ತೆಯಲ್ಲಿ ನಿರ್ಮಾಣಗೊಳ್ಳುತಿರುವ ಕನ್ನಡ ಮತ್ತು ಆಂಗ್ಲ ಮಾಧ್ಯಮ ಪೂರ್ವ ಪ್ರಾಥಮಿಕ ಹಾಗೂ ಪ್ರಾಥಮಿಕ ಶಾಲಾ ಕೊಠಡಿ ನಿರ್ಮಿಸಲು ಅಂದಾಜು ಮೊತ್ತ ರೂ.100.00 ಲಕ್ಷಗಳ ಅನುದಾನವನ್ನು ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ಸರ್ಕಾರದ ವಿವೇಚನಾ ಕೋಟಾದಡಿ ಬಿಡುಗಡೆ ಮಾಡಲು ಮಾನ್ಯ ಯೋಜನಾ ಸಚಿವರನ್ನು ಕೋರಿರುತ್ತಾರೆ. ಸದರಿ ಟಿಪ್ಪಣಿಯಂತೆ ಮಾನ್ಯ ಯೋಜನಾ ಸಚಿವರು ತಮ್ಮ ಟಿಪ್ಪಣಿಯಲ್ಲಿ ಅಗತ್ಯ ಕ್ರಮವಹಿಸುವಂತೆ ಸೂಚಿಸಿರುತ್ತಾರೆ.

ಮೇಲೆ ಓದಲಾದ (4)ರ ಪತ್ರದಲ್ಲಿ ಜಂಟಿ ಕಾರ್ಯದರ್ಶಿಗಳು, ಗದಗ ಜಿಲ್ಲೆಯ ಗದಗ ನಗರದ ಶ್ರೀ ರಾಕೇಶ್ ಸಿದ್ಧರಾಮಯ್ಯ ಪೂರ್ವ ಪ್ರಾಥಮಿಕ ಹಾಗೂ ಪ್ರಾಥಮಿಕ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ವಿಧ್ಯಾರ್ಥಿಗಳ ಅನುಕೂಲಕ್ಕಾಗಿ ಶಾಲಾ ಕೊಠಡಿ ನಿರ್ಮಾಣಕ್ಕೆ

ಅಂದಾಜು ಮೊತ್ತ ರೂ.100.00 ಲಕ್ಷಗಳ ಅನುದಾನವನ್ನು ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ಸರ್ಕಾರದ ವಿವೇಚನಾ ಕೋಟಾದಡಿ ಬಿಡುಗಡೆ ಮಾಡಲು ಅಗತ್ಯ ಕ್ರಮವಹಿಸುವಂತೆ ತಿಳಿಸಿರುತ್ತಾರೆ.

ಮೇಲೆ ಓದಲಾದ (5) ಮತ್ತು (6)ರ ಆದೇಶಗಳಲ್ಲಿ 2023-24ನೇ ಸಾಲಿನಲ್ಲಿ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಗೆ ಸರ್ಕಾರದ ವಿವೇಚನಾ ಕೋಟಾದಡಿ ಅಂದಾಜು ಮೊತ್ತ ರೂ.50.00 ಲಕ್ಷಗಳ 6 ಮುಂದುವರೆದ ಕಾಮಗಾರಿಗಳಿಗೆ ಹಾಗೂ ಅಂದಾಜು ಮೊತ್ತ ರೂ.47.00 ಲಕ್ಷಗಳ 5 ಕಾಮಗಾರಿಗಳಿಗೆ ಅನುಮೋದನೆ ನೀಡಲಾಗಿರುತ್ತದೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದೆ, 2023-24ನೇ ಸಾಲಿನಲ್ಲಿ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ ವ್ಯಾಪ್ತಿಗೆ ಬರುವ ಗದಗ ಜಿಲ್ಲೆಯ ಗದಗ ನಗರದ ಶ್ರೀ ರಾಕೇಶ್ ಸಿದ್ಧರಾಮಯ್ಯ ಪೂರ್ವ ಪ್ರಾಥಮಿಕ ಹಾಗೂ ಪ್ರಾಥಮಿಕ ಶಾಲಾ ಕೊಠಡಿ ನಿರ್ಮಾಣಕ್ಕೆ ಸರ್ಕಾರದ ವಿವೇಚನಾ ಕೋಟಾದಡಿ ಮೊತ್ತ ರೂ.100.00 ಲಕ್ಷಗಳ ಅನುದಾನ ಬಿಡುಗಡೆ ಮಾಡಲು ಸರ್ಕಾರವು ಉದ್ದೇಶಿಸಿದ್ದು, ಅದರಂತೆ ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ:ಪಿಡಿಎಸ್ 39 ಪಿಟಿಪಿ 2024,ಬೆಂಗಳೂರು, ದಿನಾಂಕ:30.07.2024**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ 2023-24ನೇ ಸಾಲಿನ ಆಯವ್ಯಯದಲ್ಲಿ ಒದಗಿಸಲಾಗಿರುವ ರೂ.3950.00 ಲಕ್ಷಗಳ (ಬಂಡವಾಳ/ ವಿ.ಘ.ಯೋ/ ಗಿ.ಉ.ಯೋ) ಅನುದಾನದಲ್ಲಿ ಸರ್ಕಾರದ ವಿವೇಚನಾ ನಿಧಿ (GDQ)ಗೆ ಮೀಸಲಿಟ್ಟ ಅನುದಾನ ರೂ.197.50 ಲಕ್ಷಗಳಲ್ಲಿ ರೂ.100.00 (ರೂ.ನೂರು ಲಕ್ಷಗಳು ಮಾತ್ರ) ಲಕ್ಷಗಳನ್ನು ಗದಗ ಜಿಲ್ಲೆಯ ಗದಗ ನಗರದ ಶ್ರೀ ರಾಕೇಶ್ ಸಿದ್ಧರಾಮಯ್ಯ ಪೂರ್ವ ಪ್ರಾಥಮಿಕ ಹಾಗೂ ಪ್ರಾಥಮಿಕ ಶಾಲಾ ಕೊಠಡಿ ನಿರ್ಮಾಣಕ್ಕೆ ಅನುದಾನ ಬಿಡುಗಡೆ ಮಾಡಲು ಸರ್ಕಾರವು ಅನುಮೋದನೆ ನೀಡಿ ಆದೇಶಿಸಿದೆ.

**ಷರತ್ತುಗಳು:-**

1. ಅನುಮೋದನೆ ನೀಡಿರುವ ಕ್ರಿಯಾಯೋಜನೆಯ ಕಾಮಗಾರಿಗಳನ್ನು ಆಡಳಿತಾತ್ಮಕ ತಾಂತ್ರಿಕ ಮಂಜೂರಾತಿ ಪಡೆದು, 2023-24ನೇ ಸಾಲಿನ ಆಯವ್ಯಯದಲ್ಲಿ ಒದಗಿಸಿರುವ ಅನುದಾನದಲ್ಲಿ ರೂ.100.00 (ರೂ.ನೂರು ಲಕ್ಷಗಳು ಮಾತ್ರ) ಲಕ್ಷಗಳ ಮಿತಿಯಲ್ಲಿಯೇ ಕೆ.ಟಿ.ಪಿ.ಪಿ ಕಾಯ್ದೆಯನ್ವಯ ನಿಯಮಾನುಸಾರ ಅನುಷ್ಠಾನಗೊಳಿಸತಕ್ಕದ್ದು.

2. ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ಮಾರ್ಗಸೂಚಿಯನ್ವಯ ಸದರಿ ಕಾಮಗಾರಿಯನ್ನು ನಿಯಮಾನುಸಾರ ಅನುಷ್ಠಾನಗೊಳಿಸತಕ್ಕದ್ದು.

3. ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ಮಾರ್ಗಸೂಚಿಯನ್ವಯ ಅನುಮೋದಿತ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡುವಾಗ ಇತರೆ ಯಾವುದೇ ಸರ್ಕಾರಿ ಯೋಜನೆಯಡಿ ಕೈಗೊಳ್ಳದಿರುವ ಬಗ್ಗೆ ದೃಢೀಕರಿಸಿಕೊಳ್ಳತಕ್ಕದ್ದು.

--3..,

ಈ ಆದೇಶವು ಸರ್ಕಾರವು ಆಯಾ ಸಂದರ್ಭದಲ್ಲಿ ಹೊರಡಿಸುವ ಆದೇಶ ಮತ್ತು ಸುತ್ತೋಲೆಗೆ ಒಳಪಟ್ಟಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಡಿ.ಚಂದ್ರಶೇಖರಯ್ಯ)**
ನಿರ್ದೇಶಕರು
ಪ್ರದೇಶಾಭಿವೃದ್ಧಿ ಮಂಡಳಿ ವಿಭಾಗ
ಯೋಜನೆ,ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ

**ಇವರಿಗೆ,**

1. ಪ್ರಧಾನ ಮಹಾಲೇಖಪಾಲರು, (ಲೆಕ್ಕ ಪತ್ರ)/(ಲೆಕ್ಕ ಪರಿಶೋಧನಾ ಮತ್ತು 1&2, ಕರ್ನಾಟಕ, ಬೆಂಗಳೂರು.
2. ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
3. ಕಾರ್ಯದರ್ಶಿ, ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ, ಮೈದಾನ್ ಮಹಲ್ ತಮಟಕಲ್ಲು ರಸ್ತೆ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.
4. ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
5. ಶಾಖಾಧಿಕಾರಿ, ಸ್ಕೀಮರ ಶಾಖೆ, ಯೋಜನಾ ಇಲಾಖೆ. (ಕಾಂಪೆಂಡಿಯಮ್ ಗೋಸ್ಕರ)
6. ಶಾಖಾರಕ್ಷಾ ಕಡತ/ಹೆಚ್ಚುವರಿ ಪ್ರತಿ

*****